**All India Radio: Bangalore**
**National Bulletin In Kannada**
**06.02.2026 7.35 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**06.02.2026 7.35 pm**

**<>><><*><><<>**

ಮುಖ್ಯಾಂಶಗಳು

೧. ವಿವಿಧ ವಿಷಯಗಳ ಕುರಿತು ಮುಂದುವರಿದ ಪ್ರತಿಪಕ್ಷಗಳ ಗದ್ದಲ; ಉಭಯ ಸದನಗಳ ಕಲಾಪ ಸೋಮವಾರಕ್ಕೆ ಮುಂದೂಡಿಕೆ

೨. ಸ್ಥಿರ ನೀತಿಕ್ರಮಗಳಿಂದಾಗಿ ಭಾರತೀಯ ರೈಲ್ವೆಯ ಆರ್ಥಿಕ ಪರಿಸ್ಥಿತಿಯಲ್ಲಿ ಗಮನಾರ್ಹ ಸುಧಾರಣೆ- ರೈಲ್ವೆ ಸಚಿವ ಅಶ್ವಿನಿ ವೈಷ್ಣವ್

೩. ಜಮ್ಮು-ಕಾಶ್ಮೀರದ ಅಂತಾರಾಷ್ಟ್ರೀಯ ಗಡಿ ಪ್ರದೇಶಗಳಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಭೇಟಿ; ಬಿಎಸ್‌ಎಫ್ ಸಿಬ್ಬಂದಿಗೆ ಕಲ್ಯಾಣ ಯೋಜನೆ ಘೋಷಣೆ

೪. ಹತ್ತೊಂಬತ್ತು ವರ್ಷದೊಳಗಿನವರ ಐಸಿಸಿ ವಿಶ್ವಕಪ್ ಕ್ರಿಕೆಟ್; ಫೈನಲ್‌ನಲ್ಲಿಂದು ಇಂಗ್ಲೆಂಡ್‌ಗೆ ೪೧೨ ರನ್‌ಗಳ ಬೃಹತ್ ಗುರಿ ನೀಡಿದ ಭಾರತ

**<>><><*><><<>**

ವಿವಿಧ ವಿಷಯಗಳ ಕುರಿತು ವಿರೋಧ ಪಕ್ಷಗಳ ಪ್ರತಿಭಟನೆ ಹಿನ್ನೆಲೆಯಲ್ಲಿ ಉಭಯ ಸದನಗಳ ಕಲಾಪವನ್ನು ಸೋಮವಾರಕ್ಕೆ ಮುಂದೂಡಲಾಗಿದೆ. ಲೋಕಸಭೆಯಲ್ಲಿಂದು ಮೊದಲ ಮುಂದೂಡಿಕೆಯ ನಂತರ ಮಧ್ಯಾಹ್ನ ೧೨ ಗಂಟೆಗೆ ಸದನ ಸೇರಿದಂತೆ ಕಾಂಗ್ರೆಸ್, ಟಿಎಂಸಿ, ಡಿಎಂಕೆ ಸೇರಿದಂತೆ ವಿರೋಧ ಪಕ್ಷದ ಸದಸ್ಯರು, ಸದನದ ಬಾವಿಗಿಳಿದು ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಕಲಾಪಕ್ಕೆ ಅಡ್ಡಿಪಡಿಸದಂತೆ ಮತ್ತು ತಮ್ಮ ಸ್ಥಾನಗಳಿಗೆ ಹಿಂತಿರುಗಿ ಸುಗಮ ಕಲಾಪಕ್ಕೆ ಅವಕಾಶ ನೀಡುವಂತೆ ಸಭಾಧ್ಯಕ್ಷರು ಮನವಿ ಮಾಡಿದರು. ಗದ್ದಲದ ನಡುವೆ ಸಂಬಂಧಪಟ್ಟ ಸಚಿವರು, ತಮ್ಮ ಸಚಿವಾಲಯಗಳ ದಾಖಲೆಗಳನ್ನು ಸಲ್ಲಿಸಿದರು. ಸಭಾಧ್ಯಕ್ಷರ ಮನವಿಯ ಹೊರತಾಗಿಯೂ ವಿರೋಧ ಪಕ್ಷದ ಸದಸ್ಯರು ಪ್ರತಿಭಟನೆ ಮುಂದುವರಿಸಿದ ಕಾರಣ ಸದನವನ್ನು ದಿನದ ಮಟ್ಟಿಗೆ ಮುಂದೂಡಲಾಯಿತು. ಸೋಮವಾರ ಬೆಳಗ್ಗೆ ೧೧ ಗಂಟೆಗೆ ಸದನ ಸಭೆ ಸೇರಲಿದೆ. ಇದಕ್ಕೂ ಮೊದಲು ಇಂದು ಬೆಳಗ್ಗೆ ಸದನ ಸೇರಿದಾಗ ಲೋಕಸಭಾಧ್ಯಕ್ಷ ಓಂಬಿರ್ಲಾ, ಪ್ರಶ್ನೋತ್ತರ ಅವಧಿ ಕೈಗತ್ತಿಕೊಳ್ಳಲು ಪ್ರಯತ್ನಿಸಿದರು. ಆದರೆ, ವಿರೋಧ ಪಕ್ಷದ ಸದಸ್ಯರು ಘೋಷಣೆ ಕೂಗಲು ಪ್ರಾರಂಭಿಸಿದರು. ಈ ವೇಳೆ, ಸದಸ್ಯರ ವರ್ತನೆಗೆ ಕಳವಳ ವ್ಯಕ್ತಪಡಿಸಿದ ಲೋಕಸಭಾಧ್ಯಕ್ಷರು, ಅಡಚಣೆಗಳಿಂದಾಗಿ ಇದುವರಿಗೆ ಸದನದ ೧೯ ಗಂಟೆಗಳಿಗೂ ಹೆಚ್ಚು ಸಮಯ ವ್ಯರ್ಥವಾಗಿದೆ. ಸದನದ ಘನತೆ ಕಾಪಾಡಿಕೊಳ್ಳುವಂತೆ ಹಾಗೂ ಪ್ರಶ್ನೋತ್ತರ ಅವಧಿಯಲ್ಲಿ ಇತರ ಸದಸ್ಯರಿಗೆ ಮಾತನಾಡಲು ಅವಕಾಶ ನೀಡುವಂತೆ ಮನವಿ ಮಾಡಿದರು. ಆದರೆ, ವಿರೋಧಪಕ್ಷದ ಸದಸ್ಯರು ಪ್ರತಿಭಟನೆ ಮುಂದುವರಿಸಿದ ಕಾರಣ ಸದನವನ್ನು ಮಧ್ಯಾಹ್ನ ೧೨ ಗಂಟೆಗೆ ಮುಂದೂಡಿದರು.

**<>><><*><><<>**

ಕಳೆದ ಹತ್ತು ವರ್ಷಗಳಲ್ಲಿ ಸ್ಥಿರವಾದ ನೀತಿ ಕ್ರಮಗಳಿಂದಾಗಿ ಭಾರತೀಯ ರೈಲ್ವೆಯ ಆರ್ಥಿಕ ಪರಿಸ್ಥಿತಿಯು ಗಮನಾರ್ಹವಾಗಿ ಸುಧಾರಣೆ ಕಂಡಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ರಾಜ್ಯಸಭೆಯಲ್ಲಿಂದು ಪ್ರಶ್ನೋತ್ತರ ಅವಧಿಯಲ್ಲಿ ಪೂರಕ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಪ್ರಸ್ತುತ ರೈಲ್ವೆ ಇಲಾಖೆಯು ನೌಕರರ ಪಿಂಚಣಿ ಸೇರಿದಂತೆ ಒಟ್ಟಾರೆ ಕಾರ್ಯಾಚರಣೆಗಳಿಗೆ ವಾರ್ಷಿಕವಾಗಿ ಸುಮಾರು ೨ ಲಕ್ಷ ೭೪ ಸಾವಿರ ಕೋಟಿ ರೂಪಾಯಿಗಳನ್ನು ಖರ್ಚು ಮಾಡುತ್ತಿದೆ ಎಂದು ಮಾಹಿತಿ ನೀಡಿದರು. ಈ ಹಿಂದೆ ೩೭ ಸಾವಿರ ಕೋಟಿ ರೂಪಾಯಿಗಳಿಗಿಂತ ಹೆಚ್ಚಿದ್ದ ಇಂಧನ ಅಗತ್ಯತೆಗಳ ವೆಚ್ಚವನ್ನು, ಪ್ರಸ್ತುತ ಸುಮಾರು ೩೨ ಸಾವಿರ ಕೋಟಿ ರೂಪಾಯಿಗಳಿಗೆ ಇಳಿಸಲಾಗಿದೆ. ಇಂಧನ ವೆಚ್ಚದಲ್ಲಿ ಕಡಿತದ ಹೊರತಾಗಿಯೂ ಕಳೆದ ನಾಲ್ಕು ವರ್ಷಗಳಲ್ಲಿ ರೈಲ್ವೆ ಸಂಚಾರ ಹೆಚ್ಚಾಗಿದೆ. ದೊಡ್ಡ ಪ್ರಮಾಣದ ವಿದ್ಯುದೀಕರಣ ಇದಕ್ಕೆ ಕಾರಣವಾಗಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು. ೨೦೧೪-೨೦೨೪ ರ ನಡುವೆ ರೈಲ್ವೆ ಇಲಾಖೆಯು ೫ ಲಕ್ಷದ ೪ ಸಾವಿರ ಉದ್ಯೋಗಾವಕಾಶಗಳನ್ನು ಒದಗಿಸಿದೆ. ಪ್ರಸ್ತುತ ಸರ್ಕಾರದ ಮೂರನೇ

ಅವಧಿಯಲ್ಲಿ ಸುಮಾರು ೧ ಲಕ್ಷ ೫೦ ಸಾವಿರ ಜನರಿಗೆ ಈಗಾಗಲೇ ರೈಲ್ವೆಯಲ್ಲಿ ಉದ್ಯೋಗ ಒದಗಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

**<><><*><><<>**

ದೇಶದಲ್ಲಿ ಈವರೆಗೆ ಒಟ್ಟು ೮ ಕೋಟಿ ೪೭ ಲಕ್ಷಕ್ಕೂ ಹೆಚ್ಚು ರೈತ ಗುರುತಿನ ಚೀಟಿಗಳನ್ನು ವಿತರಿಸಲಾಗಿದೆ. ೨೦೨೬-೨೦೨೭ರ ವೇಳೆಗೆ ದೇಶದಲ್ಲಿ ೧೧ ಕೋಟಿ ರೈತರಿಗೆ ರೈತ ಗುರುತಿನ ಚೀಟಿಗಳನ್ನು ವಿತರಿಸುವ ಗುರಿಯನ್ನು ಸರ್ಕಾರ ಹೊಂದಿದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ರಾಜ್ಯಸಭೆಯಲ್ಲಿಂದು ಪ್ರಶ್ನೋತ್ತರ ಅವಧಿಯಲ್ಲಿ ಪೂರಕ ಪಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಪ್ರಸ್ತುತ ೧೯ ರಾಜ್ಯಗಳಲ್ಲಿ ರೈತ ಗುರುತಿನ ಚೀಟಿಗಳನ್ನು ಸೃಜಿಸಲಾಗುತ್ತಿದೆ. ಇದರಲ್ಲಿ ಕರ್ನಾಟಕ, ಉತ್ತರಪ್ರದೇಶ, ಆಂಧ್ರಪ್ರದೇಶ, ಅಸ್ಸಾಂ, ಬಿಹಾರ, ಛತ್ತೀಸ್‌ಗಢ, ಗುಜರಾತ್, ಹರಿಯಾಣ, ಹಿಮಾಚಲ ಪ್ರದೇಶ, ಕೇರಳ, ಪಂಜಾಬ್, ಒಡಿಶಾ ಮತ್ತು ತೆಲಂಗಾಣ ಸೇರಿವೆ ಎಂದು ಮಾಹಿತಿ ನೀಡಿದರು. ೨ ಕೋಟಿ ೯೦ ಲಕ್ಷ ರೈತರು ರಾಷ್ಟ್ರೀಯ ಬೆಳೆ ವಿಮಾ ಪೋರ್ಟಲ್‌ನೊಂದಿಗೆ  ನೊಂದಾಯಿಸಿಕೊಂಡಿದ್ದಾರೆ. ರೈತರ ಆದಾಯವನ್ನು ಹೆಚ್ಚಿಸುವುದು, ಆಹಾರ ಭದ್ರತೆಯನ್ನು ಖಚಿತಪಡಿಸಿಕೊಳ್ಳುವುದು ಮತ್ತು ಜನಸಾಮಾನ್ಯರಿಗೆ ಪೌಷ್ಠಿಕ ಆಹಾರ ಒದಗಿಸುವುದು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕೃಷಿ ನೀತಿಯ ಗುರಿಯಾಗಿದೆ ಎಂದು ಹೇಳಿದರು.

**<><><*><><<>**

ಪ್ರಧಾನಮಂತ್ರಿ ಆವಾಸ್ ಯೋಜನೆ- ಗ್ರಾಮೀಣ, ಅಡಿಯಲ್ಲಿ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ೩ ಕೋಟಿ ೮೭ ಲಕ್ಷಕ್ಕೂ ಹೆಚ್ಚು ಮನೆಗಳನ್ನು ಕೇಂದ್ರ ಸರ್ಕಾರ ಮಂಜೂರು ಮಾಡಿದೆ ಎಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಖಾತೆ ರಾಜ್ಯ ಸಚಿವ ಡಾ.ಚಂದ್ರಶೇಖರ್ ಪೆಮ್ಮಸಾನಿ ತಿಳಿಸಿದ್ದಾರೆ. ರಾಜ್ಯಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಅವರು, ಮಂಜೂರಾದ ಮನೆಗಳ ಪೈಕಿ ೨ ಕೋಟಿ ೯೫ ಲಕ್ಷಕ್ಕೂ ಹೆಚ್ಚು ಮನೆಗಳು ಈ ತಿಂಗಳ ೨ನೇ ತಾರೀಖಿನ ವೇಳೆಗೆ ಪೂರ್ಣಗೊಂಡಿವೆ ಎಂದು ಮಾಹಿತಿ ನೀಡಿದರು. ಕಳೆದ ಐದು ವರ್ಷಗಳಲ್ಲಿ ೨ ಕೋಟಿ ಹತ್ತು ಲಕ್ಷ ೬೬ ಸಾವಿರಕ್ಕೂ ಹೆಚ್ಚು ಮನೆಗಳನ್ನು ಮಂಜೂರು ಮಾಡಲಾಗಿದೆ. ೨೦೨೯ರ ಮಾರ್ಚ್ ವೇಳೆಗೆ ೪ ಕೋಟಿ ೯೫ ಲಕ್ಷ ಮನೆಗಳನ್ನು ನಿರ್ಮಿಸುವ ಗುರಿಯನ್ನು ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವಾಲಯ ಹೊಂದಿದೆ ಎಂದು ಸಚಿವ ಡಾ.ಚಂದ್ರಶೇಖರ್ ಪೆಮ್ಮಸಾನಿ ತಿಳಿಸಿದರು.

**<><><*><><<>**

ಜಮ್ಮು-ಕಾಶ್ಮೀರದ ಪ್ರವಾಸದಲ್ಲಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು, ಇಂದು ಕಥುವಾ ಜಿಲ್ಲೆಯ ಅಂತಾರಾಷ್ಟ್ರೀಯ ಗಡಿಯ ಹಿರಾನಗರ ವಲಯದ ಗಡಿ ಪ್ರದೇಶಗಳಿಗೆ ಭೇಟಿ ನೀಡಿದರು. ಈ ವೇಳೆ, ಗಡಿ ಭದ್ರತಾ ಪಡೆ-ಬಿಎಸ್‌ಎಫ್ ಸಿಬ್ಬಂದಿಗೆ ಕಲ್ಯಾಣ ಯೋಜನೆಗಳನ್ನು ಗೃಹ ಸಚಿವರು ಘೋಷಿಸಿದರು.  ಹಿರಾನಗರ ವಲಯದ ಗುರ್ನಾಮ್ ಮತ್ತು ಬೊಬಿಯಾನ್ ಗಡಿ ಠಾಣೆಗಳಿಗೆ ಭೇಟಿ ನೀಡಿ, ಒಳನುಸುಳುವಿಕೆ ತಡೆಯಲು ಬಿಎಸ್‌ಎಫ್ ಮಾಡಿರುವ ವ್ಯವಸ್ಥೆಗಳನ್ನು ಅವರು ಪರಿಶೀಲಿಸಿದರು. ಈ ವೇಳೆ, ಬಿಎಸ್‌ಎಫ್ ಸಿಬ್ಬಂದಿಯೊಂದಿಗೆ ಸಚಿವ ಅಮಿತ್ ಶಾ ಸಂವಾದ ನಡೆಸಿದರು. ಜಮ್ಮುವಿನ ಲೋಕಭವನದಲ್ಲಿ ಇಂದು ಸಂಜೆ ನಡೆದ ಉನ್ನತ ಮಟ್ಟದ ಸಮಗ್ರ ಭದ್ರತಾ ಪರಿಶೀಲನಾ ಸಭೆಯ ಅಧ್ಯಕ್ಷತೆಯನ್ನು ಅವರು ವಹಿಸಿದ್ದರು. ಸಭೆಯಲ್ಲಿ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ, ಗೃಹ ಸಚಿವಾಲಯದ ಉನ್ನತ ಅಧಿಕಾರಿಗಳು, ಅರೆಸೇನಾ ಪಡೆಗಳ ಮುಖ್ಯಸ್ಥರು, ಪೊಲೀಸ್, ಆಡಳಿತ ಮತ್ತು ಗುಪ್ತ ಸಂಸ್ಥೆಗಳ ಉನ್ನತ ಅಧಿಕಾರಿಗಳು ಭಾಗವಹಿಸಿದ್ದರು.

**<><><*><><<>**

ರೆಪೊ ದರವನ್ನು ಶೇಕಡಾ ೫.೨೫ ರಷ್ಟು ಯತಾಸ್ಥಿತಿಯಲ್ಲಿ ಮುಂದುವರಿಸಲು ಭಾರತೀಯ ರಿಸರ್ವ್ ಬ್ಯಾಂಕ್-ಆರ್‌ಬಿಐ ನಿರ್ಧರಿಸಿದೆ. ಪ್ರಸ್ತುಕ ಹಣಕಾಸು ವರ್ಷದ ಆರನೇ ಮತ್ತು ಅಂತಿಮ ದ್ವೈಮಾಸಿಕ ಹಣಕಾಸು ನೀತಿ ಪ್ರಕಟಿಸಿದ ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ, ಹಣಕಾಸು ನೀತಿ ಸಮಿತಿಯು, ರೆಪೊ ದರವನ್ನು ಯತಾಸ್ಥಿತಿಯಲ್ಲಿ ಮುಂದುವರಿಸಲು ನಿರ್ಧರಿಸಿದೆ ಎಂದು ತಿಳಿಸಿದರು. ಪರಿಣಾಮವಾಗಿ ಇತರ ದರಗಳಲ್ಲಿಯೂ ಯಾವುದೇ ಬದಲಾವಣೆ ಇಲ್ಲ. ೨೦೨೫ರ ಡಿಸೆಂಬರ್‌ನಲ್ಲಿ ರೆಪೊ ದರವನ್ನು ೨೫ ಮೂಲ ಅಂಕಗಳಷ್ಟು ಆರ್‌ಬಿಐ ಕಡಿಮೆ ಮಾಡಿತ್ತು.

**<><><*><><<>**

ಪಾಕಿಸ್ತಾನದ ರಾಜಧಾನಿ ಇಸ್ಲಾಮಾಬಾದ್‌ನ ಶಿಯಾ ಮಸೀದಿಯಲ್ಲಿ ಇಂದು ನಡೆದ ಆತ್ಮಾಹುತಿ ದಾಳಿಯಲ್ಲಿ ಕನಿಷ್ಠ ೧೫ ಮಂದು ಮೃತಪಟ್ಟಿದ್ದು, ಇತರೆ ೮೦ ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ. ಶೆಹಜಾದ್ ಪಟ್ಟಣದ ತರ್ಲೈ ಇಮಾಮ್‌ಬರ್ಗಾ ಪ್ರದೇಶದಲ್ಲಿ ಸ್ಫೋಟ ಸಂಭವಿಸಿದೆ. ಆತ್ಮಾಹುತಿ ದಾಳಿಕೋರನನ್ನು ಇಮಾಮ್‌ಬರ್ಗಾದ ದ್ವಾರದಲ್ಲಿ ಪೊಲೀಸರು ತಡೆದು ನಿಲ್ಲಿಸಲು ಪ್ರಯತ್ನಿಸಿದರು. ಆದರೆ, ಆತ ತನ್ನನ್ನು ತಾನು ಸ್ಫೋಟಿಸಿಕೊಂಡ ಎಂದು ಸ್ಥಳೀಯ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

**<><><*><><<>**

ಜಿಂಬಾಬ್ವೆಯ ಹರಾರೆ ಸ್ಪೋರ್ಟ್ಸ್ ಕ್ಲಬ್ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ೧೯ ವರ್ಷದೊಳಗಿನವರ ಐಸಿಸಿ ಏಕದಿನ ವಿಶ್ವಕಪ್ ಕ್ರಿಕೆಟ್‌ನ ಫೈನಲ್ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ಟಾಸ್ ಗೆದ್ದು, ಮೊದಲು ಬ್ಯಾಟಿಂಗ್ ಮಾಡಿದ ಭಾರತ ತಂಡ ನಿಗದಿತ ೫೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೪೧೧ ರನ್‌ಗಳಿಸಿದೆ. ೧೪ ವರ್ಷದ ವೈಭವ್ ಸೂರ್ಯವಂಶಿ ೮೦ ಎಸೆತಗಳಲ್ಲಿ ಸ್ಫೋಟಕ ೧೭೫ ರನ್‌ಗಳನ್ನು ಸಿಡಿಸಿ, ತಂಡದ ಬೃಹತ್ ಮೊತ್ತಕ್ಕೆ ಕಾರಣರಾದರು. ೪೧೨ ರನ್‌ಗಳ ಗುರಿ ಬೆನ್ನತ್ತಿರುವ ಇಂಗ್ಲೆಂಡ್ ಇತ್ತೀಚಿನ ವರದಿಯಂತೆ ೩೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೨೪೧ ರನ್ ಮಾಡಿ ಆಡುತ್ತಿದೆ.

**<><><*><><<>**

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು, ಶ್ರೀಲಂಕಾದ ಜನತಾ ವಿಮುಕ್ತಿ ಪೆರಮುನ ಪಕ್ಷದ ಪ್ರಧಾನ ಕಾರ್ಯದರ್ಶಿ ಟಿಲ್ವಿನ್ ಸಿಲ್ವಾ ನೇತೃತ್ವದ ನಿಯೋಗದೊಂದಿಗೆ ಸಂವಾದ ನಡೆಸಿದರು. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಸಚಿವರು, ಉಭಯ ದೇಶಗಳು, ಬೆಳವಣಿಗೆಯ ಅವಕಾಶಗಳು ಮತ್ತು ಸಾಮಾಜಿಕ ಕಲ್ಯಾಣ ಉಪಕ್ರಮಗಳ ಕುರಿತು ಚರ್ಚಿಸಿವೆ ಎಂದು ತಿಳಿಸಿದ್ದಾರೆ.

**<><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<><><ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ><><<>**